## ಅಂಗಡಿ ಮುಂದೆ ನಿಲ್ಲಿಸಿದ್ದ ವಾಹನ ಕಳವು; ಕಳ್ಳನ ಕೃತ್ಯ ಕ್ಯಾಮೆರಾದಲ್ಲಿ ದಾಖಲು



**ದೊಡ್ಡಬಳ್ಳಾಪುರ:** ನಗರದ ಡಿ ಕ್ರಾಸ್ ಬಳಿ ನಿಲ್ಲಿಸಿದ್ದ ಟಿವಿಎಸ್ ಎಕ್ಸ್‌ಎಲ್–100 ವಾಹನವನ್ನು ಕಳ್ಳನೊಬ್ಬ ಕಳವು ಮಾಡಿಕೊಂಡು ಹೋಗಿರುವ ಘಟನೆ ಬುಧವಾರ ರಾತ್ರಿ ನಡೆದಿದೆ. ಕಳವು ಕೃತ್ಯ ಸಮೀಪದ ಅಂಗಡಿಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಆರೋಪಿಯ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

ಮಾಹಿತಿಯ ಪ್ರಕಾರ, ವಾಹನ ಮಾಲೀಕರು ಡಿ. ಕ್ರಾಸ್‌ನಲ್ಲಿರುವ ಬಾರ್‌ವೊಂದರ ಮುಂದೆ ತಮ್ಮ ಟಿವಿಎಸ್ ಎಕ್ಸ್‌ಎಲ್–100 ಅನ್ನು ನಿಲ್ಲಿಸಿ ಒಳಗೆ ತೆರಳಿದ್ದರು. ಕೆಲವೇ ನಿಮಿಷಗಳಲ್ಲಿ ಹೊರಬಂದು ನೋಡಿದಾಗ ವಾಹನ ನಾಪತ್ತೆಯಾಗಿರುವುದು ಗಮನಕ್ಕೆ ಬಂದಿದೆ.

ತಕ್ಷಣವೇ ಸುತ್ತಮುತ್ತಲಿನ ಅಂಗಡಿಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ, ಕಳ್ಳನು ಮೊದಲೇ ಎಕ್ಸ್‌–ಎಲ್ ವಾಹನವನ್ನು ಗುರಿಯಾಗಿಸಿಕೊಂಡು ಪ್ರದೇಶದಲ್ಲಿ ಸಂಶಯಾಸ್ಪದವಾಗಿ ಓಡಾಡುತ್ತಿರುವುದು ಕಂಡುಬಂದಿದೆ. ಜೇಬಿನಲ್ಲಿ ಕೀ ಇಟ್ಟುಕೊಂಡು ಹೊಂಚು ಹಾಕುತ್ತಿದ್ದ ಆತ, ವಾಹನ ಮಾಲೀಕರು ವಾಹನ ನಿಲ್ಲಿಸಿ ತೆರಳುತ್ತಿದ್ದಂತೆಯೇ ಅದನ್ನು ಕಳವು ಮಾಡಿಕೊಂಡು ಸ್ಥಳದಿಂದ ಪರಾರಿಯಾಗಿದ್ದಾನೆ.

ಸಿಸಿಟಿವಿ ದೃಶ್ಯಗಳ ಪ್ರಕಾರ, ಕಳ್ಳನು ಕಳವು ಮಾಡಿದ ವಾಹನದಲ್ಲಿ ಡಿ ಕ್ರಾಸ್ ಬಳಿ ಯೂ–ಟರ್ನ್ ಪಡೆದು ಟಿಬಿ ವೃತ್ತದ ಕಡೆಗೆ ತೆರಳಿರುವುದು ದಾಖಲಾಗಿದೆ.

ಘಟನೆ ಸಂಬಂಧ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸಿಸಿಟಿವಿ ದೃಶ್ಯಗಳ ಆಧಾರದಲ್ಲಿ ಆರೋಪಿಯ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ. ಪ್ರಕರಣದ ಕುರಿತು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗುತ್ತಿದೆ.






# ರ‍್ಯಾಂಕ್ ವಿದ್ಯಾರ್ಥಿಗಳಿಗೆ ಚಿನ್ನದ ಪದಕದ ಬದಲು ನಗದು ಚೆಕ್; ಧರಣಿ ಕುಳಿತ ವಿದ್ಯಾರ್ಥಿಗಳು




**ತುಮಕೂರು:** ವರ್ಷಗಳ ಕಾಲ ಕಠಿಣ ಪರಿಶ್ರಮ ಪಟ್ಟು ಓದಿ, ವಿಶ್ವವಿದ್ಯಾಲಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಸ್ವೀಕರಿಸುವ ಕನಸು ಕಂಡಿದ್ದ ನೂರಾರು ವಿದ್ಯಾರ್ಥಿಗಳಿಗೆ ತುಮಕೂರು ವಿಶ್ವವಿದ್ಯಾಲಯದ 19ನೇ ಘಟಿಕೋತ್ಸವದಲ್ಲಿ ನಿರಾಸೆ ಎದುರಾಗಿದೆ. ಚಿನ್ನದ ಪದಕ ವಿತರಿಸಬೇಕಿದ್ದ ವಿಶ್ವವಿದ್ಯಾಲಯವು ಪದಕಗಳ ಬದಲಿಗೆ ಕೇವಲ ಪ್ರಮಾಣಪತ್ರ ಹಾಗೂ ನಗದು ಹಣದ ಚೆಕ್ ನೀಡಲು ಮುಂದಾದ ಪರಿಣಾಮ ಘಟಿಕೋತ್ಸವ ಸಮಾರಂಭದಲ್ಲೇ ವಿದ್ಯಾರ್ಥಿಗಳ ಆಕ್ರೋಶ ಭುಗಿಲೆದ್ದಿದೆ.

ನಿನ್ನೆ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಈ ಗೊಂದಲ ಬಹಿರಂಗಗೊಂಡಿದೆ. ತಮ್ಮ ಹೆಸರನ್ನು ಘೋಷಿಸಿ ವೇದಿಕೆಗೆ ಕರೆದಾಗ ಚಿನ್ನದ ಪದಕ ಸಿಗಲಿದೆ ಎಂಬ ನಿರೀಕ್ಷೆಯಲ್ಲಿದ್ದ ವಿದ್ಯಾರ್ಥಿಗಳಿಗೆ ಕೇವಲ ಪ್ರಮಾಣಪತ್ರ ಮತ್ತು ಚೆಕ್ ನೀಡಲಾಗಿತ್ತು. ಇದರಿಂದ ಅಸಮಾಧಾನಗೊಂಡ ವಿದ್ಯಾರ್ಥಿಗಳು ಸಮಾರಂಭ ನಡೆಯುತ್ತಿದ್ದ ಸ್ಥಳದಲ್ಲೇ ಪ್ರತಿಭಟನೆ ಆರಂಭಿಸಿದರು. "ನಮಗೆ ಹಣ ಬೇಡ, ನಮ್ಮ ಸಾಧನೆಯ ಪ್ರತೀಕವಾಗಿರುವ ಚಿನ್ನದ ಪದಕ ಬೇಕು. ನಾವು ಘಟಿಕೋತ್ಸವಕ್ಕೆ ಅಗತ್ಯ ಶುಲ್ಕ ಪಾವತಿಸಿದ್ದೇವೆ. ಆದರೂ ಪದಕ ನೀಡದೆ ನಿರ್ಲಕ್ಷ್ಯ ವಹಿಸಲಾಗಿದೆ" ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ಪ್ರತಿಭಟನೆಯಿಂದ ಕೆಲಕಾಲ ಘಟಿಕೋತ್ಸವ ಕಾರ್ಯಕ್ರಮ ಸ್ಥಗಿತಗೊಂಡಿತ್ತು. ತಮ್ಮ ಮಕ್ಕಳ ಹಲವು ವರ್ಷಗಳ ಶ್ರಮಕ್ಕೆ ಸಿಗಬೇಕಿದ್ದ ಗೌರವವನ್ನು ವಿಶ್ವವಿದ್ಯಾಲಯ ಕಸಿದುಕೊಂಡಿದೆ ಎಂದು ಪೋಷಕರು ಸಹ ಅಸಮಾಧಾನ ವ್ಯಕ್ತಪಡಿಸಿದರು. ಪದಕದ ಬದಲಿಗೆ ಹಣ ನೀಡುವುದು ಸಾಧನೆಯ ಮೌಲ್ಯವನ್ನು ಕಡಿಮೆ ಮಾಡಿದಂತಾಗಿದೆ ಎಂದು ಅವರು ಆರೋಪಿಸಿದರು.

ಇದಷ್ಟೇ ಅಲ್ಲದೆ, ಪದವಿ ಪ್ರಮಾಣ ಪತ್ರಗಳ ವಿತರಣೆಯಲ್ಲಿಯೂ ಅಸಮರ್ಪಕತೆ ನಡೆದಿದೆ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಕಳೆದ 17 ಮತ್ತು 18ನೇ ಘಟಿಕೋತ್ಸವದ ದಾಖಲೆ ಕಡತಗಳಲ್ಲಿಯೇ ಹೊಸ ಪ್ರಮಾಣಪತ್ರಗಳನ್ನು ಇರಿಸಿ ವಿತರಿಸಲಾಗಿದೆ ಎಂದು ವಿದ್ಯಾರ್ಥಿಗಳು ದೂರಿದ್ದಾರೆ. ಪದಕಗಳನ್ನು ಸಿದ್ಧಪಡಿಸಲು ಸಾಧ್ಯವಾಗದಿದ್ದರೆ ಘಟಿಕೋತ್ಸವವನ್ನು ಮುಂದೂಡಬಹುದಿತ್ತು. ಆದರೆ ಕಾರ್ಯಕ್ರಮ ನಡೆಸಿ ವಿದ್ಯಾರ್ಥಿಗಳನ್ನು ನಿರಾಸೆಗೊಳಿಸಿರುವುದು ಸರಿಯಲ್ಲ ಎಂದು ಪ್ರಶ್ನಿಸಿದ್ದಾರೆ.

"ಚಿನ್ನದ ಪದಕ ಸಿಗುವವರೆಗೆ ನಾವು ಇಲ್ಲಿಂದ ತೆರಳುವುದಿಲ್ಲ" ಎಂದು ವಿದ್ಯಾರ್ಥಿಗಳು ಪಟ್ಟು ಹಿಡಿದು ಪ್ರತಿಭಟನೆ ಮುಂದುವರಿಸಿದ್ದರು. ಪರಿಸ್ಥಿತಿ ಉದ್ವಿಗ್ನಗೊಳ್ಳುತ್ತಿದ್ದಂತೆ ವಿಶ್ವವಿದ್ಯಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಲು ಮುಂದಾದರು.

ಈ ವಿವಾದಕ್ಕೆ ಸಂಬಂಧಿಸಿದಂತೆ ತುಮಕೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವೆಂಕಟೇಶ್ವರಲು ಅವರು ಬಳಿಕ ಸ್ಪಷ್ಟನೆ ನೀಡಿದ್ದಾರೆ. ಚಿನ್ನದ ಬೆಲೆ ಏರಿಕೆ ಹಾಗೂ ಪದಕ ಪೂರೈಕೆದಾರನ ನಿರ್ಲಕ್ಷ್ಯದಿಂದ ಈ ಸಮಸ್ಯೆ ಉಂಟಾಗಿದೆ ಎಂದು ಅವರು ತಿಳಿಸಿದ್ದಾರೆ. ಮಾರುಕಟ್ಟೆಯಲ್ಲಿ ಬಂಗಾರದ ಬೆಲೆ ಗಣನೀಯವಾಗಿ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಕಡಿಮೆ ವೆಚ್ಚದಲ್ಲಿ ಪದಕಗಳನ್ನು ಸಿದ್ಧಪಡಿಸಲು ಮಧ್ಯಪ್ರದೇಶದ ಇಂದೋರ್ ನಗರದ ಚಿನ್ನದ ವ್ಯಾಪಾರಿಯೊಬ್ಬರಿಗೆ ಆರ್ಡರ್ ನೀಡಲಾಗಿತ್ತು. ಆದರೆ ಆತ ನಿಗದಿತ ಸಮಯಕ್ಕೆ ಪದಕಗಳನ್ನು ಪೂರೈಸದೆ ಪದೇಪದೇ ಕಾಲಹರಣ ಮಾಡಿದ್ದಾನೆ ಎಂದು ಕುಲಪತಿಗಳು ಆರೋಪಿಸಿದರು.

"ಮೊದಲು ಮಧ್ಯಾಹ್ನ 2 ಗಂಟೆಯ ವಿಮಾನದಲ್ಲಿ ಪದಕಗಳು ಬರುತ್ತವೆ ಎಂದು ಹೇಳಿದ್ದ. ನಂತರ ಸಂಜೆ 7 ಗಂಟೆಯ ವಿಮಾನದಲ್ಲಿ ಕಳುಹಿಸುತ್ತೇನೆ ಎಂದು ಭರವಸೆ ನೀಡಿದ್ದ. ಆದರೆ ಕೊನೆಗೂ ಪದಕಗಳು ನಮ್ಮ ಕೈ ಸೇರಲಿಲ್ಲ. ಘಟಿಕೋತ್ಸವದ ದಿನಾಂಕವನ್ನು ಬದಲಾಯಿಸಲು ಸಾಧ್ಯವಾಗದ ಕಾರಣ ಅನಿವಾರ್ಯವಾಗಿ ಪದಕದ ಮೌಲ್ಯಕ್ಕೆ ಸಮನಾದ ನಗದು ಚೆಕ್ ನೀಡಲು ನಿರ್ಧರಿಸಲಾಯಿತು" ಎಂದು ಅವರು ವಿವರಿಸಿದರು.

ಘಟನಾ ಸ್ಥಳದಲ್ಲಿ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸುವ ಸಾಧ್ಯತೆ ಕಂಡುಬಂದ ಹಿನ್ನೆಲೆಯಲ್ಲಿ ಕುಲಪತಿ ಸೇರಿದಂತೆ ಹಿರಿಯ ಅಧಿಕಾರಿಗಳು ವಿದ್ಯಾರ್ಥಿಗಳೊಂದಿಗೆ ನೇರವಾಗಿ ಮಾತುಕತೆ ನಡೆಸಿದರು. ಶೀಘ್ರದಲ್ಲೇ ಅಧಿಕೃತವಾಗಿ ಚಿನ್ನದ ಪದಕಗಳನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ವಿತರಿಸಲಾಗುವುದು ಎಂದು ಲಿಖಿತ ಭರವಸೆ ನೀಡಿದರು. ಅಧಿಕಾರಿಗಳ ಈ ಭರವಸೆಯ ಬಳಿಕ ವಿದ್ಯಾರ್ಥಿಗಳು ಹಾಗೂ ಪೋಷಕರು ಪ್ರತಿಭಟನೆಯನ್ನು ಹಿಂಪಡೆದು ಅಲ್ಲಿಂದ ತೆರಳಿದರು.

ಆದರೆ ಘಟಿಕೋತ್ಸವದಂತಹ ಪ್ರತಿಷ್ಠಿತ ಕಾರ್ಯಕ್ರಮದಲ್ಲೇ ಈ ರೀತಿಯ ಎಡವಟ್ಟು ನಡೆದಿರುವುದು ವಿಶ್ವವಿದ್ಯಾಲಯದ ಆಡಳಿತಾತ್ಮಕ ವೈಫಲ್ಯವನ್ನು ಬಯಲಿಗೆಳೆದಿದೆ. ವಿದ್ಯಾರ್ಥಿಗಳ ಜೀವನದ ಮಹತ್ವದ ಕ್ಷಣವಾಗಿರುವ ಘಟಿಕೋತ್ಸವದಲ್ಲಿ ಪದಕಗಳ ಬದಲಿಗೆ ಚೆಕ್ ವಿತರಿಸಿರುವ ಘಟನೆ ಇದೀಗ ಶಿಕ್ಷಣ ವಲಯದಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ.

# ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜೀವನ ಮತ್ತು ಸಾಧನೆಗಳು ಯುವ ಜನತೆಗೆ ಸ್ಫೂರ್ತಿ ಮೂಲವಾಗಲಿ–ಶ್ರೀಕಂಠ




**ತಾಂಡವಪುರ:** ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ತಾಲೂಕು ಅಧ್ಯಕ್ಷ ಶ್ರೀಕಂಠ ಅಧ್ಯಕ್ಷತೆಯಲ್ಲಿ ಮೈಸೂರು ನಂಜನಗೂಡು ಊಟಿ ರಸ್ತೆ ಕಬಿನಿ ಸೇತುವೆ ಬಳಿ ಇರುವಸಂಗೊಳ್ಳಿ ರಾಯಣ್ಣ ವೃತ್ತದ ಬಳಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು ಪುಷ್ಪಾರ್ಚನೆ ಮಾಡಿ ಮಾತನಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ತಾಲೂಕು ಅಧ್ಯಕ್ಷ ಶ್ರೀಕಂಠ ಅವರ ಕೊಡುಗೆಗಳನ್ನು ಸ್ಮರಿಸಿ ದೂರದೃಷ್ಟಿಯ ಆಡಳಿತಗಾರರು ಜನಪರ ರಾಜರು 24ನೆಯ ಮಹಾರಾಜರಾಗಿ ನಾಲ್ಕು ದಸಗಳ ಕಾಲ ಆಳ್ವಿಕೆ ನಡೆಸಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಾಲವನ್ನು ಮೈಸೂರು ಸಂಸ್ಥಾನದ ಸುವರ್ಣ ಯುಗ ಎಂದು ಕರೆಯಲಾಗುತ್ತದೆ ಮಹಿಳಾ ಶಿಕ್ಷಣ ಮಹಿಳೆಯರ ಸಬಲೀಕರಣಕ್ಕೆ ಪ್ರೋತ್ಸಾಹ ಎಲ್ಲಾ ಜಾತಿ ಜನಾಂಗದವರ ಕಲ್ಯಾಣಕ್ಕೆ ಆದ್ಯತೆ ನೀಡಿದವರು ಅವರ ಜೀವನ ಮತ್ತು ಸಾಧನೆಗಳು ಯುವಜನತೆಗೆ ಸ್ಫೂರ್ತಿಯ ಮೂಲವಾಗಲಿ ಎಂದು ಆಶಯ ವ್ಯಕ್ತಪಡಿಸಿದರು

ಕುಮಾರ್ ಅರಸ್ ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆ ಅಪಾರವಾಗಿದೆ ಮೈಸೂರು ವಿಶ್ವವಿದ್ಯಾನಿಲಯ ಸ್ಥಾಪನೆ ಕೆಆರ್‌ಎಸ್ ಡ್ಯಾಮ್ ಸೇರಿದಂತೆ ಅವರ ಕೊಡುಗೆಗಳು ಅಪರವಾಗಿವೆ ಎಂದು ನೆನೆದರು ಕೃಷಿ ಕೈಗಾರಿಕೆ ಆರೋಗ್ಯ ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರಗಳಿಗೂ ಆದ್ಯತೆ ನೀಡಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆಗಳು ಮೈಸೂರಿನ ಮೂಲೆ ಮೂಲೆಯಲ್ಲೂ ಕಾಣುತ್ತಿವೆ ಹಾಗೂ ಬೀದಿ ದೀಪಗಳನ್ನು ಮೊದಲ ಬಾರಿಗೆ ತಂದವರು ಕಣ್ಣಿನ ಆಸ್ಪತ್ರೆ ಪೇಪರ್ ಕಾರ್ಖಾನೆಗಳನ್ನು ಮತ್ತು ರೈಲ್ವೆ ಬ್ರಿಡ್ಜು ತಂದರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆಗಳು ಇನ್ನು ಅಪಾರವಾಗಿದೆ ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು

ಈ ಸಂದರ್ಭದಲ್ಲಿ ಪ್ರಸಾದ್ ದಿನೇಶ್ ಅರಸ್ ಮೋಹನ್ ಕಲ್ಲಹಳ್ಳಿ ಕುಮಾರ್ ಅರಸ್ ಮನೋಜ್ ಕುಮಾರ್ ಗಿರೀಶ್ ಅರಸ್ ಚಂದ್ರು ವಿಶ್ವಕರ್ಮ ಶಂಕ್ರಪ್ಪ ಪುಟ್ ಮಾದಪ್ಪ ಸಿದ್ದರಾಜು ಸುಧೀಂದ್ರ ವಿನಯ್ ಮಂಜು ದೀಪು ದೊಡ್ಡ ಬೋರೇಗೌಡ

## ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿ ಜಿ. ಗೋಪಾಲಸ್ವಾಮಿ ಆಯ್ಕೆ



**ಯಳಂದೂರು:** ತಾಲೂಕಿನ ಕೆಸ್ತೂರು ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿ ಜಿ. ಗೋಪಾಲಸ್ವಾಮಿ, ಉಪಾಧ್ಯಕ್ಷರಾಗಿ ಮಮತಾ ಮರಿಸ್ವಾಮಿರನ್ನು ಬುಧವಾರ ಆಯ್ಕೆ ಮಾಡಲಾಯಿತು.

ಶಾಲೆಯಲ್ಲಿ ನಡೆದ ಸಭೆಯಲ್ಲಿ ಇವರಿಬ್ಬರನ್ನು ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಜಿ. ಗೋಪಾಲಸ್ವಾಮಿ ಮಾತನಾಡಿ, ಈ ಶಾಲೆಯಲ್ಲಿ ನೂರಾರು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ಶಾಲೆಗೆ ಹತ್ತಾರು ವರ್ಷಗಳ ಐತಿಹ್ಯವಿದೆ. ಇಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಸರ್ಕಾರಿ ಹಾಗೂ ಉತ್ತಮ ಖಾಸಗಿ ಕಂಪೆನಿಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಈ ಶಾಲೆಯ ಅಭಿವೃದ್ಧಿಗೆ ನನ್ನ ಅವಧಿಯಲ್ಲಿ ಪ್ರಾಮಾಣಿಕವಾಗಿ ದುಡಿಯುತ್ತೇನೆ. ಶಾಲೆಗೆ ಬೇಕಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಶ್ರಮ ವಹಿಸುತ್ತೇನೆ. ಮಕ್ಕಳ ಶಿಕ್ಷಣಕ್ಕೆ ಬೇಕಾಗಿರುವ ಅಗತ್ಯತೆಗಳನ್ನು ಕೊಡಿಸುವ ನಿಟ್ಟಿನಲ್ಲಿ ಉತ್ತಮವಾಗಿ ಕೆಲಸವನ್ನು ನಿರ್ವಹಿಸುತ್ತೇನೆ ಎಂದರು.

ಉಪಾಧ್ಯಕ್ಷೆ ಮಮತಾ ಮರಿಸ್ವಾಮಿ, ಸದಸ್ಯರಾದ ಕೆಸ್ತೂರು ಸಿದ್ದಪ್ಪಸ್ವಾಮಿ, ರಾಘವೇಂದ್ರ, ದಾಸ್, ಪ್ರಭುಸ್ವಾಮಿ, ಮುಖ್ಯ ಶಿಕ್ಷಕ ಸಿದ್ದರಾಜು, ಶಿಕ್ಷಕ ಸುನೀಲ್ ಮುಖಂಡ ಡಿ.ಎನ್. ನಾಗರಾಜು ಸೇರಿದಂತೆ ಅನೇಕರು ಇದ್ದರು.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ:
9535786812\8217606793

## ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರನ್ನು ಚಿಕ್ಕಯ್ಯನ ಛತ್ರ ಹೋಬಳಿಯ ಕಾಂಗ್ರೆಸ್ ಮುಖಂಡರಿಂದ ಅದ್ದೂರಿ ಸ್ವಾಗತ



**ತಾಂಡವಪುರ:** ಮುಖ್ಯ ಮಂತ್ರಿ ಡಿಕೆ ಶಿವಕುಮಾರ್ ಅವರ ಸಂಪುಟದಲ್ಲಿ ನೂತನ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ ನವರನ್ನು ಚಿಕ್ಕಯ್ಯನ ಛತ್ರ ಹೋಬಳಿಯ ಕಾಂಗ್ರೆಸ್ ಮುಖಂಡರಿಂದ ಅದ್ದೂರಿ ಸ್ವಾಗತ ಕೋರಲಾಯಿತು

ಸನ್ಮಾನ ಸ್ವೀಕರಿಸಿದ ಬಳಿಕ ನೂತನ ಸಚಿವ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರು ಮಾತನಾಡಿ

ನಿಮ್ಮ ಪ್ರೀತಿಯ ಅಭಿಮಾನಕ್ಕೆ ನಾವು ಸದಾ ಚಿರಋಣಿ ಯಾಗಿರುತ್ತೇವೆ ಎಂದು ನೂತನ ಸಚಿವ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ ರವರು ಹೇಳಿದರು

ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಕೆಂಪಿ ಸಿದ್ದನ ಹುಂಡಿ ತಾಂಡವಪುರ ಬಂಚಳ್ಳಿ ಹುಂಡಿ ಹಾಗೂ ಬಿಳಿಗೆರೆ ತಿರುಗುಂದ ಮರಳೂರು ಗ್ರಾಮವು ಸೇರಿದಂತೆ ಮುಂತಾದ ಗ್ರಾಮಗಳ ಮುಖಂಡರಗಳು ಬೆಂಗಳೂರಿನ ಅವರ ನಿವಾಸದಲ್ಲಿ ಭೇಟಿ ಮಾಡಿ ಸನ್ಮಾನಿಸಿದರು ಗೌರವಿಸಿದ್ದರು

ಈ ಸಂದರ್ಭದಲ್ಲಿ ಕೆಂಪಿ ಸಿದ್ರ ಹುಂಡಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಕೆ ಎಸ್ ರವಿ ಶೃತಿ ಬೀರಯ್ಯ ತಾಂಡವಪುರದ ಕಾಂಗ್ರೆಸ್ ಮುಖಂಡ ಎಂ ದಕ್ಷಿಣ ಮೂರ್ತಿ ಧರ್ಮರಾಜು ಕಿರುಗುಂದ ಶಿವ ನಾಗ ಬಿಳಿಗೆರೆ ಗುಂಡಪ್ಪ ರವಿ ಮರಳೂರು ಗೊದ್ದನಪುರ ದೊರೆ ಸ್ವಾಮಿ ಸೇರಿದಂತೆ ಮುಂತಾದವರು ಈ ಸಂದರ್ಭದಲ್ಲಿ ನೂತನ ಸಚಿವರನ್ನು ಸನ್ಮಾನಿಸಿ ಗೌರವಿಸಿದರು